**ದಿನಾಂಕ: 21.11.2022 ರಂದು ಮದ್ಯಾಹ್ನ 03:00 ಗಂಟೆಗೆ ವಾರ್ಡ್ ಸಂಖ್ಯೆ 203 (ಹಳೆ ವಾರ್ಡ್ ಸಂಖ್ಯೆ 180) ಬನಶಂಕರಿ ದೇವಸ್ಥಾನ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

*ಹಾಜರಿದ್ದ ಅಧಿಕಾರಿಗಳು:-*

1. ಶ್ರೀ. ಸಿ. ಆರ್. ಸತೀಶ್ ಕುಮಾರ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಮಂಜುನಾಥ್ ವೆಂಕಣ್ಣ ನಾಯಕ – ಸಹಾಯಕ ಅಭಿಯಂತರರು (ವಾರ್ಡ್ 203(180) ಬನಶಂಕರಿ ದೇವಸ್ಥಾನ) (ಕಿಯೋನಿಕ್ಸ್)
3. ಶ್ರೀ. ಮಹಮದ್ ಸಾದಿಕ್ – ಕಿರಿಯ ಆರೋಗ್ಯ ಪರಿವೀಕ್ಷಕರು

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 203 (ಹಳೆ ವಾರ್ಡ್ ಸಂಖ್ಯೆ 180) ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಈ ಹಿಂದಿನ ಸಭೆಯಲ್ಲಿ ನಡೆದ ವಿಷಯಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಲಾಯಿತು. ಅಧಿಕಾರಿಗಳಿಗೆ ನಿಗಧಿತ ಅವಧಿಯೊಳಗೆ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿ, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ಡೆಬ್ರಿಸ್ ವಿಲೇವಾರಿ ಬಗ್ಗೆ.

ಪ್ರಗತಿಪುರ ಮುಖ್ಯರಸ್ತೆಯ ಬೆಂಗಳೂರು ತಾಲ್ಲೂಕು ಕಛೇರಿಯ ಹತ್ತಿರ ಡೆಬ್ರಿಸ್ ತುಂಬಿರುತ್ತದೆ. ಸದರಿ ಡೆಬ್ರಿಸ್ ಅನ್ನು ಸ್ವಚ್ಚಗೊಳಿಸಿಕೊಡುವಂತೆ ಕೋರಿದರು. ಅದರಂತೆ ಸದರಿ ಡೆಬ್ರಿಸ್‌ಗಳನ್ನು ವಿಲೇವಾರಿ ಮಾಡಿ ಸ್ವಚ್ಚಗೊಳಿಸುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

2. ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.

ಹಿಂದಿನ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯ ಗಂಗಾಧರನಗರ 1ನೇ ಮತ್ತು 2ನೇ ಮುಖ್ಯರಸ್ತೆಗಳಲ್ಲಿ ಬಿಡಬ್ಲ್ಯೂಎಸ್‌ಎಸ್‌ಬಿ ಇಲಾಖೆ ವತಿಯಿಂದ ಕಾಮಗಾರಿಯನ್ನು ನಿರ್ವಹಿಸಿ ಸದರಿ ಕಾಮಗಾರಿಯ ಡೆಬ್ರಿಸ್ ಅನ್ನು ಅಲ್ಲೇ ಬಿಟ್ಟು ಹೋಗಿರುತ್ತಾರೆ. ಅದರಿಂದ ಸಾರ್ವಜನಿಕರಿಗೆ ಓಡಾಡಲು ತುಂಬಾ ಕಷ್ಟಕರವಾಗಿರುತ್ತದೆ ಎಂದು ಸಾರ್ವಜನಿಕರು ತಿಳಿಸಿದ್ದರು. ಸದರಿ ಡೆಬ್ರಿಸ್‌ಅನ್ನು ವಿಲೇವಾರಿ ಮಾಡಿ ಸ್ವಚ್ಚಗೊಳಿಸಲಾಗಿರುತ್ತದೆ ಎಂದು ಬಿಡಬ್ಲ್ಯೂಎಸ್‌ಎಸ್‌ಬಿ ಇಲಾಖೆ ರವರು ತಿಳಿಸಿದರು.

ವಾರ್ಡ್ ವ್ಯಾಪ್ತಿಯ ಉಮಾರ್‌ಭಾಗ್ ಲೇಔಟ್‌ನ ಪೈಪ್‌ಲೈನ್ ರಸ್ತೆಯಲ್ಲಿ ಗುಂಡಿಗಳು ಹೆಚ್ಚಾಗಿದ್ದು ಸದರಿ ರಸ್ತೆಯಲ್ಲಿ ವಾಹನಗಳು ಸಂಚರಿಸಲು ಕಷ್ಟಕರವಾಗಿರುತ್ತದೆ. ಆದ್ದರಿಂದ ಸದರಿ ರಸ್ತೆಯನ್ನು ಕೂಡಲೇ ಸರಿಪಡಿಸಿ ಸಾರ್ವಜನಿಕ ಓಡಾಟಕ್ಕೆ ಅನುಕೂಲ ಮಾಡಿಕೊಡುವಂತೆ ಸಾರ್ವಜನಿಕರು ಕೋರಿದರು.

ಮು.ತಿ.ನೋ

ವಾರ್ಡ್ ವ್ಯಾಪ್ತಿಯ ಉಮಾರ್‌ಭಾಗ್ ಲೇಔಟ್ ಮುಖ್ಯರಸ್ತೆಯು ಹಾಳಾಗಿದ್ದು ವಾಹನ ಸವಾರರಿಗೆ ಹಾಗೂ ಪಾದಚಾರಿಗಳಿಗೆ ಓಡಾಡಲು ತೊಂದರೆಯಾಗುತ್ತಿರುತ್ತದೆ. ಆದ್ದರಿಂದ ಸದರಿ ರಸ್ತೆಯನ್ನು ಸರಿಪಡಿಸಿ ಕೊಡುವಂತೆ ಸಾರ್ವಜನಿಕರು ಕೋರಿದರು. ಅದರಂತೆ ಸದರಿ ರಸ್ತೆಯನ್ನು ಪರಿಶೀಲಿಸಿ ಕೂಡಲೇ ಅಗತ್ಯ ಕ್ರಮ ಕೈಗೊಳ್ಳಲು ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ವಾರ್ಡ್ ವ್ಯಾಪ್ತಿಯ ಪ್ರಗತಿಪುರ ಮುಖ್ಯರಸ್ತೆಯಲ್ಲಿರುವ ಅಂಗನವಾಡಿ ಕಟ್ಟಡವನ್ನು ನವೀಕರಿಸಿರುತ್ತಾರೆ. ಸದರಿ ಕಾಮಗಾರಿಯು ಮುಗಿದಿದ್ದರೂ ಕಟ್ಟಡದ ಡೆಬ್ರಿಸ್‌ಅನ್ನು ಪಾದಚಾರಿ ಮಾರ್ಗದ ಮೇಲೆಯೇ ಬಿಟ್ಟಿರುತ್ತಾರೆ. ಇದರಿಂದ ಪಾದಚಾರಿಗಳಿಗೆ ಓಡಾಡಲು ತೊಂದರೆಯಾಗುತ್ತಿರುತ್ತದೆ. ಆದ್ದರಿಂದ ಸದರಿ ಡೆಬ್ರಿಸ್‌ಅನ್ನು ಕೂಡಲೇ ತೆಗೆಸಿಕೊಡಲು ಸಾರ್ವಜನಿಕರು ಕೋರಿದರು.

ಮತದಾರರ ಗುರುತಿನ ಚೀಟಿಗೆ ಆಧಾರ್ ಜೋಡಣೆ ಮಾಡುವುದು ಹಾಗೂ 2023ನೇ ಸಾಲಿನ ಮತದಾರರ ಪಟ್ಟಿ ಪರಿಷ್ಕರಣೆಯ ಕಾರ್ಯ ನಡೆಯುತ್ತಿದ್ದು, ವಾರ್ಡ್ ವ್ಯಾಪ್ತಿಯ ಮತದಾರರ ಪಟ್ಟಿಯಲ್ಲಿ ಹೆಸರು ನೊಂದಾಯಿಸಲು ನಮೂನೆ-6, ತೆಗೆದುಹಾಕಲು ನಮೂನೆ-7 ಮತ್ತು ತಿದ್ದುಪಡಿಗೊಳಿಸಲು ನಮೂನೆ-8 ರಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ಸಾರ್ವಜನಿಕರಿಗೆ ಕಂದಾಯ ಇಲಾಖೆ ಅಧಿಕಾರಿಗಳು ವಿವರಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿದಿನ ಕಸವನ್ನು ಸ್ವಚ್ಛಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸೂಚಿಸಲಾಯಿತು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಸಿ. ಆರ್. ಸತೀಶ್ ಕುಮಾರ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Satishkumar

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 203
ಬನಶಂಕರಿ ದೇವಸ್ಥಾನ